(4) ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕ, 1996

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿದ್ಧರಾಮಯ್ಯ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1996ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"1996 ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ಧರಾಮಯ್ಯ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1996ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಬಿ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕ, 1996

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಸಿದ್ಧರಾಮಯ್ಯ : ಮಾನ್ಯ ಅಧ್ಯಕ್ಷರೇ, ಆರು ತಿಂಗಳ ಲೇಖಾನುದಾನ ವಿಧೇಯಕಕ್ಕೆ ಮಾನ್ಯ ಸದಸ್ಯರು ಒಪ್ಪಿಗೆ ನೀಡಬೇಕೆಂದು ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3,

ಅಧ್ಯಕ್ಷರು : "ಖಂಡ 2 ಮತ್ತು 3 ಹಾಗೂ ಅನುಸೂಚಿ ಈ ವಿಧೇಯಕದ ಅಂಗವಾಗಿರುತ್ತವೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಹಾಗೂ ಅನುಸೂಚಿ ವಿಧೇಯಕದ ಅಂಗವಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಅಂಗವಾಗಿರುತ್ತವೆ'

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಗಳು ವಿಧೇಯಕದ ಭಾಗವಾಗಿರುತ್ತವೆ)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಅಂಗೀಕರಿಸುವುದು"

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು)

(2) ಕರ್ನಾಟಕ ಧನ ವಿನಿಯೋಗ ವಿಧೇಯಕ, 1996 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1996ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಪರಯರ್ಯಾಲೋಚಿಸುವುದು"